# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ.ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 143(231)

ಉತ್ತರಿಸುವ ದಿನಾಂಕ : 11.07.2018

ಉತ್ತರಿಸುವ ಮಂತ್ರಿಗಳು : ಕಾರ್ಮಿಕ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಾಲಕಾರ್ಮಿಕರನ್ನು ನೇಮಿಸಿಕೊಳ್ಳಬಾರದೆಂದು ನಿಯಮಗಳಿದ್ದರೂ, ಬೆಂಗಳೂರು ನಗರದಲ್ಲಿ ಬಾಲಕಾರ್ಮಿಕರ ಸಂಖ್ಯೆ ಹೆಚ್ಚಾಗಿರಲು ಕಾರಣವೇನು: | ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಬರುವ ನೊಂದಾಯಿತ ಕಾರ್ಖಾನೆಗಳಲ್ಲಿ ಬಾಲಕಾರ್ಮಿಕರನ್ನು ನೇಮಕಾತಿ ಮಾಡಿಕೊಂಡಿರುವ ಯಾವುದೇ ಪ್ರಕರಣಗಳು ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. |
| ಆ) | ಬಾಲಕಾರ್ಮಿಕರ ನೇಮಕವನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು: ಇಲಾಖಾಧಿಕಾರಿಗಳು ತಪಾಸಣೆ ಮಾಡಿ ಕ್ರಮ ಕೈಗೊಳ್ಳಲು ವಿಫಲವಾಗಿದ್ದು, ಅಂತಹ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದೇ: | ಇಲಾಖಾಧಿಕಾರಿಗಳು ಅವರವರ ಕ್ಷೇತ್ರ ವ್ಯಾಪ್ತಿಯಲ್ಲಿನ ನೊಂದಾಯಿತ ಕಾರ್ಖಾನೆಗಳಲ್ಲಿ ಕಾಲಕಾಲಕ್ಕೆ ನಡೆಸುವ ಪರಿವೀಕ್ಷಣಾ ಸಮಯದಲ್ಲಿ ಇಂತಹ ಪ್ರಕರಣಗಳು ಕಂಡುಬಂದಲ್ಲಿ, ಆಡಳಿತ ವರ್ಗದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. ನೊಂದಾಯಿತ ಕಾರ್ಖಾನೆಗಳಲ್ಲಿ ಅಂತಹ ಯಾವುದೇ ಪ್ರಕರಣಗಳು ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ, ಈ ಅಂಶವನ್ನು ಹೊರತುಪಡಿಸಿ ಬಾಲಕಾರ್ಮಿಕ ನೇಮಕಾತಿ ತಡೆಯುವ ಯಾವುದೇ ಯೋಜನೆಗಳು ಇಲಾಖೆಯ ವ್ಯಾಪ್ತಿಯಲ್ಲಿ ಇರುವುದಿಲ್ಲ. |
| ಇ) | ಇನ್ನು ಮುಂದಾದರೂ ಬಾಲಕಾರ್ಮಿಕರ ನಿರ್ಮೂಲನೆಗಾಗಿ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದೇ? | ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನೊಂದಾಯಿತ ಕಾರ್ಖಾನೆಗಳಲ್ಲಿ ಬಾಲಕಾರ್ಮಿಕರನ್ನು ನೇಮಕಾತಿ ಮಾಡಿಕೊಂಡಿರುವುದು ಕಂಡುಬಂದ್ದಲ್ಲಿ, ಕಾನೂನಿನ ಅಡಿಯಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು. |

ಕಾಇ 93 ಸಿಎಲ್‌ಸಿ 2018

(ವೆಂಕಟರಮಣಪ್ಪ)

ಕಾರ್ಮಿಕ ಸಚಿವರು